ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

4

ಇಲಾಖೆ / ವಿಷಯ : DEPARTMENT / SUBJECT: C.M.

ಪತ್ರಿಕೆಯ ಹೆಸರು : NAME OF THE NEWS PAPER: [illegible]    ದಿನಾಂಕ : DATE : 9/10/20

# ವರದಿ ಸಿದ್ಧಪಡಿಸಿ ಅನುಮತಿ ಪಡೆಯಿರಿ

9/10/20

## ಪ್ರವಾಸೋದ್ಯಮ ಇಲಾಖೆಯ ಪ್ರಮುಖ ಯೋಜನೆ: ಸಭೆಯಲ್ಲಿ ಸಿಎಂ ಸೂಚನೆ



ಪ್ರವಾಸೋದ್ಯಮ ಇಲಾಖೆಯ ಪ್ರಮುಖ ಯೋಜನೆ ಕುರಿತಂತೆ ಗುರುವಾರ ಸಭೆ ನಡೆಯಿತು.

ಬೆಂಗಳೂರು: ರಾಜ್ಯದಲ್ಲಿ ಪ್ರವಾಸೋದ್ಯಮ ತಾಣ, ಕೇಂದ್ರಗಳನ್ನು ಗುರುತಿಸಿ ಅಭಿವೃದ್ಧಿ ಪಡಿಸುವ ನಿಟ್ಟಿನಲ್ಲಿ ಸಮಗ್ರ ವರದಿ ಸಿದ್ಧಪಡಿಸಿ ಅನುಮತಿ ಪಡೆಯಬೇಕು ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅಧಿಕಾರಿಗಳಿಗೆ ಸೂಚಿಸಿದರು.

ಗೃಹ ಕಚೇರಿ 'ಕೃಷ್ಣಾ'ದಲ್ಲಿ ಗುರುವಾರ ಪ್ರವಾಸೋದ್ಯಮ ಇಲಾಖೆಯ ಪ್ರಮುಖ ಯೋಜನೆ ಕುರಿತಂತೆ ನಡೆದ ಸಭೆಯಲ್ಲಿ ಮಾತನಾಡಿ, ಬಾದಾಮಿ, ಕೆಮ್ಮಣ್ಣುಗುಂಡಿ, ಪಟ್ಟದಕಲ್ಲು, ಶ್ರೀರಂಗಪಟ್ಟಣ, ಜೋಗ ಜಲಪಾತ, ಮುಳ್ಳಯ್ಯನಗಿರಿ, ಗಗನಚುಕ್ಕಿ- ಭರಚುಕ್ಕಿ, ನಂದಿಬೆಟ್ಟ ಸೇರಿ ರಾಜ್ಯದ ಪ್ರಮುಖ ಪ್ರವಾಸಿ ಸ್ಥಳಗಳನ್ನು ಅಂತಾರಾಷ್ಟ್ರೀಯ ಮಟ್ಟದ ತಾಣಗಳನ್ನಾಗಿ ಮೇಲ್ದರ್ಜೆಗೇರಿಸಲು ತಕ್ಷಣವೇ ಕ್ರಮ ಕೈಗೊಳ್ಳಬೇಕು. ದೇಶ- ವಿದೇಶಗಳಿಂದ ಪ್ರವಾಸಿಗರನ್ನು ಆಕರ್ಷಿಸಲು ರಾಜ್ಯದ ಪ್ರವಾಸಿ ಸ್ಥಳಗಳಿಗೆ ಮೂಲ ಸೌಕರ್ಯ ಕಲ್ಪಿಸಬೇಕು. ತಿಂಗಳೊಳಗೆ ಅನುಷ್ಠಾನ ಪಾಲನಾ ವರದಿ ನೀಡಬೇಕು ಎಂದು ಸೂಚನೆ ನೀಡಿದರು.

ವಿಶ್ವವಿಖ್ಯಾತ ಜೋಗ ಜಲಪಾತದ ಸಮಗ್ರ ಅಭಿವೃದ್ಧಿಗೆ ಈಗಾಗಲೇ 120 ಕೋಟಿ ರೂ. ಮೊತ್ತಕ್ಕೆ ಅನುಮೋದನೆ ನೀಡಲಾಗಿದೆ. ಯಾವ ಯೋಜನೆಗಳನ್ನು ಜಾರಿಗೊಳಿಸಬಹುದು ಎಂಬ ಬಗ್ಗೆ ಸಮಗ್ರ ವರದಿ ನೀಡಬೇಕು. ವಿಳಂಬವಾದರೆ ಸಹಿಸುವುದಿಲ್ಲ ಎಂದು ಯಡಿಯೂರಪ್ಪ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಐತಿಹಾಸಿಕ ಬಾದಾಮಿಯಲ್ಲಿ ಕೆಲವು ಪಟ್ಟಭದ್ರ ಹಿತಾಸಕ್ತಿಗಳು ಪ್ರವಾಸೋದ್ಯಮ ಇಲಾಖೆಯ ಜಮೀನು ಒತ್ತುವರಿ ಮಾಡಿರುವ ಆರೋಪವಿದೆ. ಕೂಡಲೇ ಜಿಲ್ಲಾಡಳಿತ ಒತ್ತುವರಿ ತೆರವುಗೊಳಿಸಿ ಜಮೀನು ವಶಪಡಿಸಿಕೊಳ್ಳಬೇಕು. ಪ್ರಭಾವಿಗಳಿದ್ದರೂ ಮುಲಾಜಿಲ್ಲದೆ ತೆರವುಗೊಳಿಸಬೇಕು. ನಂದಿ ಬೆಟ್ಟ ಹಾಗೂ ಕೆಮ್ಮಣ್ಣುಗುಂಡಿ ಪ್ರವಾಸಿ ತಾಣಗಳನ್ನು ಕೂಡಲೇ ತೋಟಗಾರಿಕೆ ಇಲಾಖೆಯಿಂದ ಪ್ರವಾಸೋದ್ಯಮ ಇಲಾಖೆಗೆ ಹಸ್ತಾಂತರಿಸಬೇಕು. ಈ ಪ್ರಕ್ರಿಯೆಯನ್ನು ಆದಷ್ಟು ಶೀಘ್ರವಾಗಿ ಪೂರ್ಣಗೊಳ್ಳಬೇಕು ಎಂದು ಸೂಚನೆ ನೀಡಿದರು.

ಈ ನಡುವೆ ಅಧಿಕಾರಿಗಳು, ನಂದಿಬೆಟ್ಟದ ಅಭಿವೃದ್ಧಿಗೆ 13.86 ಕೋಟಿ ರೂ., ಕೆಮ್ಮಣ್ಣುಗುಂಡಿಗೆ 27.57 ಕೋಟಿ ರೂ., ಬಾದಾಮಿಗೆ 25 ಕೋಟಿ ರೂ., ಶ್ರೀರಂಗಪಟ್ಟಣಕ್ಕೆ 12.6 ಕೋಟಿ ರೂ. ಮೇಲುಕೋಟೆ ಅಭಿವೃದ್ಧಿಗೆ 7.9 ಕೋಟಿ ರೂ. ವೆಚ್ಚದ ಕಾಮಗಾರಿ ಕೈಗೊಳ್ಳಲು ವಿಸ್ತೃತ ವರದಿ ಸಿದ್ಧಪಡಿಸಲಾಗಿದೆ ಎಂದು ಮುಖ್ಯಮಂತ್ರಿಗಳ ಗಮನಕ್ಕೆ ತಂದರು.

ಸಭೆಯಲ್ಲಿದ್ದ ಸಚಿವ ಸಿ.ಟಿ. ರವಿ, ಪ್ರವಾಸೋದ್ಯಮ ಬೆಳವಣಿಗೆಗೆ ವಿಪುಲ ಅವಕಾಶಗಳಿರುವ ಜಿಲ್ಲೆಗಳನ್ನು ಗುರುತಿಸಿ ಅಲ್ಲಿ ಅಗತ್ಯ ಅಧಿಕಾರಿಗಳನ್ನು ನಿಯೋಜಿಸಬೇಕು. ಜಿಲ್ಲಾ ಹಂತದಲ್ಲಿ ವಿಭಾಗೀಯ ಮಟ್ಟದ ಶೇ. 73ರಷ್ಟು ಸಿಬ್ಬಂದಿ ಹುದ್ದೆ ಖಾಲಿ ಇದ್ದು, ಖಾಲಿಯಿರುವ ಹುದ್ದೆಗಳನ್ನು ಸಾಧ್ಯವಾದಷ್ಟು ಭರ್ತಿ ಮಾಡಲು ಮುಂದಾಗುವುದು ಸೂಕ್ತ. ಅಗತ್ಯ ಸಂಖ್ಯೆಯ ಅಧಿಕಾರಿಗಳಿಲ್ಲದೆ ಪ್ರಗತಿ ಪರಿಶೀಲನೆ ಅಸಾಧ್ಯವಾಗಿದೆ. ಪ್ರವಾಸೋದ್ಯಮ ಚಟುವಟಿಕೆಗಳಿಗೆ ಹೆಚ್ಚಿನ ಅವಕಾಶವಿರುವ ಜಿಲ್ಲೆಗಳಲ್ಲಿ ಕೆಎಎಸ್ ಅಧಿಕಾರಿಗಳಿಗೆ ಹೆಚ್ಚುವರಿ ಪ್ರಭಾರ ನೀಡುವ ಬಗ್ಗೆಯೂ ಚಿಂತಿಸಬಹುದು ಎಂದು ಸಲಹೆ ನೀಡಿದರು.

ಇದಕ್ಕೆ ಸ್ಪಂದಿಸಿದ ಮುಖ್ಯಮಂತ್ರಿಗಳು, ಖಾಲಿ ಹುದ್ದೆ ಭರ್ತಿ ಸಂಬಂಧ ಹಣಕಾಸು ಇಲಾಖೆ ಅಧಿಕಾರಿಗಳೊಂದಿಗೆ ಮತ್ತೊಂದು ಸುತ್ತಿನ ಸಭೆ ನಡೆಸಿ ಕ್ರಮಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಮುಖ್ಯ ಕಾರ್ಯದರ್ಶಿ ಟಿ.ಎಂ. ವಿಜಯ ಭಾಸ್ಕರ್, ಪ್ರವಾಸೋದ್ಯಮ ಇಲಾಖೆ ಕಾರ್ಯದರ್ಶಿ ಟಿ.ಕೆ. ಅನಿಲ್ ಕುಮಾರ್, ಕೆಎಸ್‌ಟಿಡಿಸಿ ಅಧ್ಯಕ್ಷೆ ಶ್ರುತಿ ಇತರೆ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

ಗೃಹ ಕಚೇರಿ 'ಕೃಷ್ಣಾ'ದಲ್ಲಿ ಗುರುವಾರ ಪ್ರವಾಸೋದ್ಯಮ ಇಲಾಖೆಯ ಪ್ರಮುಖ ಯೋಜನೆ ಕುರಿತಂತೆ ಸಭೆ ನಡೆಯಿತು.